ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

**ಸಂಖ್ಯೆ : ಎಡಿಎಂ2(2) ಸ್ವಅ01/2015-16** **ದಿನಾಂಕ: 29.09.2015**

# ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ಸಾರ್ವಜನಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆ ಮತ್ತು ಅನುದಾನರಹಿತ ಹಾಗೂ ಶಿಕ್ಷಣ ಇಲಾಖೆಯ ಕಛೇರಿಗಳಲ್ಲಿ ದಿನಾಂಕ: 02.10.2015 ರಿಂದ 31.10.2015 ರವರೆಗೆ ಸ್ವಚ್ಛತಾ ಆಂದೋಲನವನ್ನು ನಡೆಸುವ ಬಗ್ಗೆ.

ಉಲ್ಲೇಖ: ದಿನಾಂಕ: 28.09.2015 ರಂದು ಮಾನ್ಯ ಶಿಕ್ಷಣ ಪ್ರಧಾನ ಕಾರ್ಯದರ್ಶಿಗಳ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನ.

@@@@@@@@@

1. ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಮಾನ್ಯ ಪ್ರಧಾನ ಮಂತ್ರಿಗಳ ಸ್ವಚ್ಛತಾ ಆಂದೋಲನದಡಿಯಲ್ಲಿ ಮತ್ತು ದಿನಾಂಕ: 28.09.2015 ರಂದು ಪ್ರಧಾನ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ದಿನಾಂಕ:02.10.2015 ರಿಂದ 31.10.2015ರವರೆಗೆ ರಾಜ್ಯದ ಎಲ್ಲಾ ಶಿಕ್ಷಣ ಇಲಾಖೆಯ ಕಛೇರಿಗಳಲ್ಲಿ ಹಾಗೂ ಸರ್ಕಾರಿ, ಅನುದಾನಿತ, ಅನುದಾನ ರಹಿತ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿ ಹಾಗೂ ಉಪನಿರ್ದೇಶಕರ ಕಛೇರಿಗಳಲ್ಲಿ ಮತ್ತು ಎಲ್ಲಾ ಅಧೀನ ಕಛೇರಿಗಳಲ್ಲಿ ಸ್ವಚ್ಛತಾ ಆಂದೋಲನವನ್ನು ಹಮ್ಮಿಕೊಳ್ಳುವಂತೆ ಆದೇಶಿಸಿದ್ದಾರೆ.
2. ಸ್ವಚ್ಛತಾ ಆಂದೋಲನದಡಿಯಲ್ಲಿನ ರೂಪು-ರೇಷೆಗಳನ್ನು ಆಯಾ ಕಛೇರಿ ಮುಖ್ಯಸ್ಥರು ತೀರ್ಮಾನಿಸಿಕೊಂಡು ಆಂದೋಲನದ ದಿನಗಳಲ್ಲಿ ಗರಿಷ್ಠ ಮಟ್ಟದ ಫಲಿತಾಂಶವನ್ನು ಹೊಂದಲು ಕ್ರಮ ಕೈಗೊಳ್ಳತಕ್ಕದ್ದು, ಅಧೀನ ಕಛೇರಿಗಳಲ್ಲಿನ ಕಾರ್ಯಕ್ರಮಗಳ ಕುರಿತು ಮತ್ತು ಫಲಿತಾಂಶದ ಕುರಿತು ಮೇಲಾಧಿಕಾರಿಗಳು ಉಸ್ತುವಾರಿ ವಹಿಸಲು ತಿಳಿಸಿದೆ. ಶಾಲಾ- ಕಾಲೇಜುಗಳಲ್ಲಿ ಮಕ್ಕಳನ್ನು ಸ್ವಚ್ಛತಾ ಆಂದೋಲನದಲ್ಲಿ ಭಾಗಿಯಾಗಿಸಿಕೊಳ್ಳುವುದಲ್ಲದೆ ಶಾಲೆಯ ಸುತ್ತ-ಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆಯ ಬಗ್ಗೆ ನಾಗರಿಕರಿಗೆ ಅರಿವು ಮೂಡಿಸುವ ರೀತಿಯ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಲು ಸೂಚಿಸಿದೆ.

ಸ್ಥಳ: ಬೆಂಗಳೂರು
ದಿನಾಂಕ: 22-09-2015

30/9/15
(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, 100 ಅಡಿ ರಸ್ತೆ, ಬನಶಂಕರಿ 3ನೇ ಹಂತ, ಹೊಸಕೇರೆಹಳ್ಳಿ ರಸ್ತೆ, ಬೆಂಗಳೂರು.
3. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.

4. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಅಗತ್ಯ ಕ್ರಮಕ್ಕಾಗಿ.
5. ಎಲ್ಲಾ ಕ್ಷೇತ್ರ ಶೀಕ್ಷಣಾಧಿಕಾರಿಳ ಕಛೇರಿಗಳಿಗೆ(ಉಪನಿರ್ದೇಶಕರ ಮುಕಾಂತರ) ಅಧೀನ ಶಾಲೆಗಳಿಗೆ ಅಗತ್ಯ ಸೂಚನೆ ಹೊರಡಿಸಲು ಹಾಗೂ ಕ್ರಮಕೈಗೊಳ್ಳಲು ತಿಳಿಸಿ.
6. ಕಛೇರಿ ಪ್ರತಿ.